# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೪೮೮, ೨೨೪೨೩೮೬೭, ೨೬೬೭೨೯೯೨
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ: ಕಸಾಪ/ಆಪ್ತಶಾಖೆ/ದಾಖಲೆ/೨೦೨೨–೨೩ ದಿನಾಂಕ: ೦೩–೦೮–೨೦೨೨

ಇವರಿಗೆ

**ಸಂಪಾದಕರು / ಮುಖ್ಯ ವರದಿಗಾರರು**

.................................................

ಬೆಂಗಳೂರು

ಮಾನ್ಯರೆ,

**ಪತ್ರಿಕಾ/ಟಿ.ವಿ. ಹೇಳಿಕೆ – ಪ್ರಕಟಣೆ ಕೃಪೆಗಾಗಿ**

## ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರಿಗೆ 'ರಾಜ್ಯ ಸಚಿವರ ದರ್ಜೆ ಸ್ಥಾನಮಾನ' ನೀಡಿದ ಸರ್ಕಾರಕ್ಕೆ ಸಮಗ್ರ ಕನ್ನಡಿಗರ ಪರವಾಗಿ ಪರಿಷತ್ತು ಧನ್ಯವಾದಗಳ ಸಲ್ಲಿಕೆ.

೧. ಕನ್ನಡ ಭಾಷೆ, ಸಾಹಿತ್ಯ, ಕಲೆ, ಸಂಸ್ಕೃತಿ ಮತ್ತು ಜಾನಪದ ಇವುಗಳ ರಕ್ಷಣೆ, ಪ್ರಸಾರ ಮತ್ತು ಅಭಿವೃದ್ಧಿಯ ಮೂಲ ಧ್ಯೇಯೋದ್ದೇಶಗಳೊಂದಿಗೆ **ಕನ್ನಡ–ಕನ್ನಡಿಗ–ಕರ್ನಾಟಕದ** ಹಿತರಕ್ಷಣೆ ಕಾಪಾಡುವ ಜವಾಬ್ದಾರಿಯನ್ನು ಕನ್ನಡ ಸಾಹಿತ್ಯ ಪರಿಷತ್ತು ಹೊಂದಿದೆ. **ಮೈಸೂರು ಮಹಾರಾಜರಾದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್** ಅವರ ಪೋಷಣೆಯೊಂದಿಗೆ ಸ್ಥಾಪಿತವಾದ ಸಮಗ್ರ ಕನ್ನಡಿಗರ ಏಕೈಕ ಪ್ರಾತಿನಿಧಿಕ ಸಂಸ್ಥೆಯಾದ **ಕನ್ನಡ ಸಾಹಿತ್ಯ ಪರಿಷತ್ತು ೧೦೭ ವರ್ಷಗಳ** ಸುದೀರ್ಘ ಹಾಗೂ ಶ್ರೀಮಂತ ಇತಿಹಾಸ ಹೊಂದಿದೆ.

೨. ಎಲ್ಲ ಕನ್ನಡ ಸಂಘ–ಸಂಸ್ಥೆಗಳ ಮಾತೃ ಸಂಸ್ಥೆಯಾದ ಕನ್ನಡ ಸಾಹಿತ್ಯ ಪರಿಷತ್ತಿಗೆ ಅನೇಕ ಪ್ರಾತಃಸ್ಮರಣೀಯರು ಅಧ್ಯಕ್ಷರಾಗಿ ಕನ್ನಡ ಕಟ್ಟುವಲ್ಲಿ, ಬೆಳೆಸುವಲ್ಲಿ ಅಪಾರ ಶ್ರಮವಹಿಸಿದ್ದಾರೆ. ಕನ್ನಡ ಸಾಂಸ್ಕೃತಿಕ ರಾಯಭಾರಿಗಳಾಗಿ ನಾಡಿನುದ್ದಗಲಕ್ಕೂ ಕನ್ನಡ ಪ್ರೇಮವನ್ನು ಹೆಚ್ಚಿಸುವಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಅತ್ಯಂತ ಕ್ರಿಯಾಶೀಲತೆಯಿಂದ ಕನ್ನಡಪರ ಕಾರ್ಯಚಟುವಟಿಕೆಗಳನ್ನು ನಡೆಸಿಕೊಂಡು ಬರುತ್ತಿದ್ದಾರೆ.

೩. ಇಲ್ಲಿಯವರೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಿಗೆ ಯಾವುದೇ ಸರ್ಕಾರ ಸಚಿವರ ಸ್ಥಾನಮಾನವನ್ನು ನೀಡಿರಲಿಲ್ಲ. ಇದೇ ಮೊಟ್ಟಮೊದಲ ಬಾರಿಗೆ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ ಅವರು ಕನ್ನಡ ಸಾಹಿತ್ಯ ಪರಿಷತ್ತಿನ ಹಿರಿಮೆ–ಗರಿಮೆ, ಇತಿಹಾಸವನ್ನು ಮನಗಂಡು, ನಾಡು–ನುಡಿಗೆ ಪರಿಷತ್ತು ಸಲ್ಲಿಸುತ್ತಿರುವ ಅನನ್ಯ ಸೇವೆಯನ್ನು ಪರಿಗಣಿಸಿ ಹಾಗೂ ಪರಿಷತ್ತಿನ ಚುನಾವಣೆ ಇತಿಹಾಸದಲ್ಲಿ ದಾಖಲೆಯನ್ನು ಸೃಷ್ಟಿಸಿದ ಮತ್ತು **'ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿ'** ಮಾಡುವ ಗುರಿಯನ್ನಿಟ್ಟುಕೊಂಡು, ಅನೇಕ ಕ್ರಾಂತಿಕಾರಿ ಬದಲಾವಣೆಯ ಮುಖೇನ ಪರಿಷತ್ತಿನ ಕಾರ್ಯಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುತ್ತಿರುವ **ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರ ಕಾರ್ಯವೈಖರಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ತಕ್ಷಣದಿಂದ (೦೩–೦೮–೨೦೨೨) ಜಾರಿಗೆ ಬರುವಂತೆ "ರಾಜ್ಯ ಸಚಿವರ ದರ್ಜೆ"ಗೆ ಸಮನಾದ ಸ್ಥಾನಮಾನವನ್ನು ನೀಡಿ ಗೌರವಿಸಿರುವುದು** ಅತ್ಯಂತ ಸಂತಸದಾಯಕ ವಿಷಯವಾಗಿದೆ.

೪. ಕನ್ನಡ ಸಾಹಿತ್ಯ ಪರಿಷತ್ತಿಗೆ ಕನಿಷ್ಠ ಒಂದು ಕೋಟಿ ಸದಸ್ಯತ್ವದ ಗುರಿಯನ್ನು ಹೊಂದಿದ್ದು, ಜನಸಾಮಾನ್ಯರು ಪರಿಷತ್ತಿನ ಸದಸ್ಯರಾಗಬೇಕೆಂಬ ಸದುದ್ದೇಶದಿಂದ ಹಾಗೂ ಗ್ರಾಮಮಟ್ಟಕೆ ಪರಿಷತ್ತನ್ನು ಕೊಂಡೊಯ್ಯಬೇಕೆಂಬ ದೃಷ್ಟಿಯಿಂದ ಸದಸ್ಯತ್ವ ಶುಲ್ಕವನ್ನು ರೂ. ೨೫೦–೦೦ ಗಳಿಗೆ ಇಳಿಸಿ, ಆಲ್‌ಲೈನ್‌ನಲ್ಲಿ ನೋಂದಾಯಿಸಲು ಅತ್ಯಾಧುನಿಕ ತಂತ್ರಜ್ಞಾನದ ಆ್ಯಪ್ ಅನ್ನು ಪರಿಷತ್ತಿಗೆ ಅಳವಡಿಸಿಕೊಂಡಿರುವ, ವಿಶ್ವದ್ಯಾಂತ ಕನ್ನಡವನ್ನು ಒಗ್ಗೂಡಿಸಲು ಹೊರರಾಜ್ಯ, ಕೇಂದ್ರಾಡಳಿತ ಪ್ರದೇಶ ಮತ್ತು ಹೊರದೇಶ ಘಟಕಗಳನ್ನು ಸ್ಥಾಪಿಸಲು ಕ್ರಮಕೈಗೊಂಡಿರುವ ಹಾಗೂ ಕನ್ನಡ ಶಾಲೆಗಳ ಪುನಶ್ಚೇತನ ಮಾಡುವ ನಿಟ್ಟಿನಲ್ಲಿ ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸುತ್ತಿರುವ ನಾಡೋಜ ಡಾ. ಮಹೇಶ ಜೋಶಿ ಅವರಿಗೆ ಸರ್ಕಾರ ನೀಡಿರುವ 'ರಾಜ್ಯ ಸಚಿವರ ದರ್ಜೆ' ಸ್ಥಾನಮಾನದಿಂದಾಗಿ ಇನ್ನೂ ಹೆಚ್ಚಿನ ರೀತಿಯಲ್ಲಿ ಕನ್ನಡದ ಕೆಲಸಗಳನ್ನು ಮಾಡಲು ಶಕ್ತಿ ಬಂದಂತಾಗಿದೆ.

೫. ಸರ್ಕಾರ 'ರಾಜ್ಯ ಸಚಿವರ ದರ್ಜೆ' ಸ್ಥಾನಮಾನದ ಗೌರವ ನೀಡಿರುವುದು ಸಾಹಿತ್ಯ ಪರಿಷತ್ತಿನ ಎಲ್ಲ ಸದಸ್ಯರಿಗೆ ಸಲ್ಲಿಸಿರುವ ಸನ್ಮಾನವಾಗಿದೆ. ಈ ಮೂಲಕ ಮಾನ್ಯ ಅಧ್ಯಕ್ಷರ ನೇತೃತ್ವದಲ್ಲಿ ಕಾರ್ಯನಿರ್ವಹಿಸುತ್ತಿರುವ ಕನ್ನಡ ಸಾಹಿತ್ಯ ಪರಿಷತ್ತಿನ ಮೇಲೆ ಸರ್ಕಾರ ಇಟ್ಟಿರುವ ಭರವಸೆ, ವಿಶ್ವಾಸವನ್ನು ಕಾಪಾಡಿಕೊಂಡು ಹೋಗುವ ಹಾಗೂ ಇನ್ನೂ ಹೆಚ್ಚಿನ ಜವಾಬ್ದಾರಿಯನ್ನು ಹೊತ್ತುಕೊಂಡು ಕನ್ನಡ–ಕನ್ನಡಿಗ–ಕರ್ನಾಟಕ ಇವುಗಳ ಹಿತರಕ್ಷಣೆ ಮತ್ತು ಅಭಿವೃದ್ಧಿಗೆ ಕಟಿಬದ್ಧನಾಗಿರುತ್ತೇನೆ ಎಂಬ ಭಾವನೆಯನ್ನು ಈ ಸುಸದಂರ್ಭದಲ್ಲಿ ನಾಡೋಜ ಡಾ. ಮಹೇಶ ಜೋಶಿ ಅವರು ವ್ಯಕ್ತಪಡಿಸಿರುತ್ತಾರೆ.

೬. ಕನ್ನಡಿಗರ ಒತ್ತಾಸೆಯಂತೆ, ಕನ್ನಡ ಸಾಹಿತ್ಯ ಪರಿಷತ್ತಿನಂತಹ ಘನ ಸಂಸ್ಥೆಯ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ ಅವರಿಗೆ 'ರಾಜ್ಯ ಸಚಿವರ ದರ್ಜೆ' ಸ್ಥಾನಮಾನ ನೀಡುವ ಮೂಲಕ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಸವರಾಜ ಬೊಮ್ಮಾಯಿ ಅವರು ಪರಿಷತ್ತಿಗೆ ಹೆಚ್ಚಿನ ಪ್ರಾತಿನಿಧ್ಯ ನೀಡಿರುವುದಕ್ಕಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ಎಲ್ಲ ಸದಸ್ಯರಾದಿಯಾಗಿ, ಜಿಲ್ಲಾ, ತಾಲ್ಲೂಕು, ಗಡಿರಾಜ್ಯ, ಹೋಬಳಿ ಘಟಕಗಳ ಕಾರ್ಯಕಾರಿ ಸಮಿತಿ ಸದಸ್ಯರ ಹಾಗೂ ಸಮಗ್ರ ಕನ್ನಡಿಗರ ಪರವಾಗಿ ಪರಿಷತ್ತು ಧನ್ಯವಾದಗಳನ್ನು ಸಲ್ಲಿಸುತ್ತದೆ.

**(ನೇ. ಭ. ರಾಮಲಿಂಗಶೆಟ್ಟಿ)**
ಗೌರವ ಕಾರ್ಯದರ್ಶಿ